ನಿ.330 (54)

ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಡಾ॥ ವೈ.ಎ. ನಾರಾಯಣಸ್ವಾಮಿ ಇವರು ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಮಹತ್ವಾಕಾಂಕ್ಷಿ ಕುಡಿಯುವ ನೀರಿನ ಯೋಜನೆಯಾದ ಎತ್ತಿನಹೊಳೆ ಯೋಜನೆ ಪ್ರಾರಂಭವಾಗಿ 8 ವರ್ಷಗಳನ್ನು ಕಳೆದರೂ, ಈ ಯೋಜನೆಗಾಗಿ ಪರಿಷ್ಕೃತ ಯೋಜನಾ ಅಂದಾಜು ಪಟ್ಟಿಯನ್ನು ತಯಾರಿಸಿ ಅನುಮೋದನೆ ನೀಡಿ ಸಾವಿರಾರು ಕೋಟಿ ಹಣ ಬಿಡುಗಡೆ ಮಾಡಿದ್ದರೂ, ಇದೂವರೆವಿಗೂ ಶೇ.40 ರಷ್ಟು ಪ್ರಗತಿಯನ್ನು ಕಾಣದೇ ಇರುವುದರಿಂದ ಹಾಗೂ ಈ ಯೋಜನೆಗೆ ಸಂಬಂಧಿಸಿದ ಭೂಸ್ವಾಧೀನ ಪ್ರಕ್ರಿಯೆಗಳು ಇನ್ನೂ ಪೂರ್ಣಗೊಳ್ಳದೇ ಇರುವುದರಿಂದ, ಈ ಯೋಜನಾ ವ್ಯಾಪ್ತಿಯಲ್ಲಿ ಬರುವ ನೀರು ಶೇಖರಣಾ ಜಲಾಶಯಗಳ ಕಾಮಗಾರಿಗಳು ಇನ್ನೂ ಪ್ರಾರಂಭ ಆಗದೇ ಇರುವುದರಿಂದ ಈ ಯೋಜನೆ ಅನುಷ್ಠಾನದ ಬಗ್ಗೆ ಹಾಗೂ ಪೂರ್ಣಗೊಳ್ಳುವುದರಲ್ಲಿ, ಆ ಭಾಗದ ಜನರಲ್ಲಿ ಆತಂಕ ಮತ್ತು ಗೊಂದಲ ಸೃಷ್ಠಿ ಮಾಡಿರುವ ವಿಚಾರವನ್ನು ಸದನದಲ್ಲಿ ಚರ್ಚೆಗೆ ಅವಕಾಶ ಕಲ್ಪಿಸಿಕೊಡಬೇಕೆಂದು ನಿಯಮ 330 ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಜಲಸಂಪನ್ಮೂಲ ಸಚಿವರ ಉತ್ತರ.

ಕುಡಿಯುವ ನೀರಿನ ತೀವ್ರ ಅಭಾವ ಎದುರಿಸುತ್ತಿರುವ ರಾಜ್ಯದ ಹಾಸನ, ಚಿಕ್ಕಮಗಳೂರು, ತುಮಕೂರು, ಬೆಂಗಳೂರು ಗ್ರಾಮಾಂತರ, ರಾಮನಗರ, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಜಿಲ್ಲೆಗಳಿಗೆ 24.01 ಟಿ.ಎಂ.ಸಿ ನೀರನ್ನು ಬಳಸಿಕೊಂಡು ಸುರಕ್ಷಿತ ಕುಡಿಯುವ ನೀರು ಒದಗಿಸುವ ಹಾಗೂ ಅಂತರ್ಜಲ ಮರುಪೂರಣಕ್ಕಾಗಿ ಈ ಭಾಗಗಳಲ್ಲಿನ ಸುಮಾರು 527 ಸಣ್ಣ ನೀರಾವರಿ ಕೆರೆಗಳಿಗೆ ನೀರು ತುಂಬಿಸುವ ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ರೂ.12,912.36 ಕೋಟಿ ಮೊತ್ತದ ಪರಿಷ್ಕೃತ ಯೋಜನಾ ವರದಿಗೆ ಸರ್ಕಾರದಿಂದ ದಿನಾಂಕ:17/2/2014 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯನ್ನು 02 ಹಂತಗಳಲ್ಲಿ ಕೈಗೆತ್ತಿಕೊಳ್ಳಲಾಗಿರುತ್ತದೆ. ಸದರಿ ಯೋಜನೆಯ ಪ್ರಸ್ತುತ ಹಂತದ ವಿವರಗಳು ಕೆಳಗಿನಂತಿವೆ:

- ✓ ಈ ಯೋಜನೆಯ ಮೊದಲನೇ ಹಂತದ ಲಿಫ್ಟ್ ಕಾಮಗಾರಿಗಳನ್ನು ಒಟ್ಟು ರೂ.3716.77 ಕೋಟಿ ಮೊತ್ತದಲ್ಲಿ ಐದು ಪ್ಯಾಕೇಜ್‌ಗಳಲ್ಲಿ ಮಾರ್ಚ್ 2014 ರಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, ಅರಣ್ಯ ಭೂಮಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದ ಅರಣ್ಯ ಮತ್ತು ಪರಿಸರ ಇಲಾಖೆಯಿಂದ ಹಂತ-2ಕ್ಕೆ ದಿನಾಂಕ:15.09.2018 ರಂದು ತೀರುವಳಿ ಪಡೆದು ಕಾಮಗಾರಿಗಳ ತೀವ್ರ ಅನುಷ್ಠಾನಕ್ಕೆ ಚಾಲನೆ ನೀಡಲಾಗಿದೆ. ಅಲ್ಲದೆ, ಯೋಜನೆಯ ಮೊದಲನೇ ಹಂತದ ಕಾಮಗಾರಿಗಳಿಗೆ ಅವಶ್ಯವಿರುವ 219.44 ಮೆ.ವ್ಯಾ ವಿದ್ಯುತ್‌ಶಕ್ತಿ ಪೂರೈಸುವ ಸಬ್‌ಸ್ಟೇಶನ್ ನಿರ್ಮಾಣದ ಕಾಮಗಾರಿ ಮತ್ತು ಟ್ರಾನ್ಸ್‌ಮಿಷನ್ ಲೈನ್ ನಿರ್ಮಾಣ ಕಾಮಗಾರಿಗಳನ್ನು ಒಟ್ಟು ರೂ.398.56ಕೋಟಿ ಮೊತ್ತದಲ್ಲಿ ಎರಡು ಪ್ಯಾಕೇಜಗಳಲ್ಲಿ 2017-18 ರಲ್ಲಿ ಕೈಗೆತ್ತಿಕೊಂಡಿದ್ದು, ಮೊದಲನೇ ಹಂತದ ಕಾಮಗಾರಿಗಳು ಬಹುತೇಕ ಪೂರ್ಣಗೊಳ್ಳುವ ಹಂತದಲ್ಲಿರುತ್ತವೆ. ಸದರಿ ಕಾಮಗಾರಿಗಳಿಗೆ ಅಕ್ಟೋಬರ್ 2021 ರ ಅಂತ್ಯದ ವರೆಗೆ ರೂ.3411.72 ಕೋಟಿ ವೆಚ್ಚ ಮಾಡಲಾಗಿರುತ್ತದೆ.
- ✓ ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಹಂತ-2 ರಡಿಯ 260 ಕಿ.ಮೀ ಉದ್ದದ ಗುರುತ್ವ ಕಾಲುವೆ, ಭೈರಗೊಂಡ್ಲು ಜಲಾಶಯದ ಕಾಮಗಾರಿ ಮತ್ತು ಭೈರಗೊಂಡ್ಲು ಜಲಾಶಯದ ವರೆಗಿನ ಫೀಡರ್ ಕಾಲುವೆ ಕಾಮಗಾರಿಗಳನ್ನು ಒಟ್ಟಾರೆ ರೂ.11854.35 ಕೋಟಿ ಮೊತ್ತದಲ್ಲಿ 35 ಪ್ಯಾಕೇಜಗಳಲ್ಲಿ 2017-18 ರಿಂದ ಹಂತ ಹಂತವಾಗಿ ಕೈಗೆತ್ತಿಕೊಂಡಿದ್ದು, ಈಗಾಗಲೇ ಗುರುತ್ವ ಕಾಲುವೆಯ 89.00 ಕಿ.ಮಿ ಉದ್ದದ ಕಾಲುವೆ ಕಾಮಗಾರಿಯು ಪೂರ್ಣಗೊಂಡಿದ್ದು, ಬಾಕಿ ಕಾಮಗಾರಿಗಳು ಪ್ರಗತಿಯಲ್ಲಿವೆ. ಗುರುತ್ವ ಕಾಲುವೆ ಕಾಮಗಾರಿಗಳಿಗೆ ಅಕ್ಟೋಬರ್ 2021 ರ ಅಂತ್ಯದ ವರೆಗೆ ಒಟ್ಟಾರೆ ರೂ.3562.61 ಕೋಟಿ ವೆಚ್ಚ ಮಾಡಲಾಗಿರುತ್ತದೆ.
- ✓ ಭೈರಗೊಂಡ್ಲು ಜಲಾಶಯಕ್ಕಿಂತ ಮೊದಲು ಕವಲೊಡೆಯುವ ಬೆಂಗಳೂರು ಗ್ರಾಮಾಂತರ ಜಿಲ್ಲೆ ಮತ್ತು ರಾಮನಗರ ಜಿಲ್ಲೆಗಳಿಗೆ ಕುಡಿಯುವ ನೀರನ್ನು ಒದಗಿಸುವ ಹಾಗೂ ನೆಲಮಂಗಲ ತಾಲ್ಲೂಕಿನ 2 ಕೆರೆಗಳನ್ನು ತುಂಬಿಸುವ ರೂ.1325.96 ಕೋಟಿ ಮೊತ್ತದ ರಾಮನಗರ ಫೀಡರ್ ಕಾಲುವೆ ಕಾಮಗಾರಿ, ತುಮಕೂರು, ಕೊರಟಗೆರೆ, ಮಧುಗಿರಿ ಮತ್ತು ಪಾವಗಡ ತಾಲ್ಲೂಕುಗಳಿಗೆ ಕುಡಿಯುವ ನೀರು ಮತ್ತು ಈ ಭಾಗದ 79 ಸಣ್ಣ ನೀರಾವರಿ ಕೆರೆಗಳಿಗೆ ನೀರನ್ನು ಒದಗಿಸುವ ರೂ.1361.94 ಕೋಟಿ ಮೊತ್ತದ

ಮೊತ್ತದ ಮಧುಗಿರಿ ಫೀಡರ್ ಕಾಲುವೆ ಕಾಮಗಾರಿ (2 ಪ್ಯಾಕೇಜ್‌ಗಳಲ್ಲಿ) ಮತ್ತು ಗೌರಿಬಿದನೂರು ತಾಲ್ಲೂಕಿಗೆ ಕುಡಿಯುವ ನೀರಿಗಾಗಿ ಮತ್ತು ಗೌರಿಬಿದನೂರು, ಕೊರಟಗೆರೆ, ಮಧುಗಿರಿ ಮತ್ತು ದೊಡ್ಡಬಳ್ಳಾಪುರ ತಾಲ್ಲೂಕುಗಳ 107 ಸಣ್ಣ ನೀರಾವರಿ ಕೆರೆಗಳಿಗೆ ನೀರನ್ನು ಒದಗಿಸುವ ರೂ.863.48 ಕೋಟಿ ವೆಚ್ಚದ ಗೌರಿಬಿದನೂರು ಫೀಡರ್ ಕಾಲುವೆ ಕಾಮಗಾರಿಗಳು ವಿವಿಧ ಹಂತದ ಪ್ರಗತಿಯಲ್ಲಿರುತ್ತವೆ. ಸದರಿ ಕಾಮಗಾರಿಗಳಿಗೆ ಅಕ್ಟೋಬರ್ 2021ರ ಅಂತ್ಯದ ವರೆಗೆ ಒಟ್ಟಾರೆ ರೂ.1255.04 ಕೋಟಿ ವೆಚ್ಚ ಮಾಡಲಾಗಿರುತ್ತದೆ.

- ✓ ಗುರುತ್ವ ಕಾಲುವೆ ಕೊನೆಯಲ್ಲಿ ಬರುವ ತುಮಕೂರು ಜಿಲ್ಲೆ ಕೊರಟಗೆರೆ ತಾಲ್ಲೂಕಿನ ಕೋಳಾಲ ಹೋಬಳಿಯ ಭೈರಗೊಂಡ್ಲು ಹತ್ತಿರ 5.78 ಟಿ.ಎಂ.ಸಿ ನೀರನ್ನು ಶೇಖರಿಸಲು ನಿರ್ಮಿಸಲು ಯೋಜಿಸಿರುವ ಜಲಾಶಯದ ನಿರ್ಮಾಣದಿಂದ 7 ಗ್ರಾಮಗಳು ಸಂಪೂರ್ಣ ಮುಳುಗಡೆಯಾಗಲಿದ್ದು, ಕೊರಟಗೆರೆ ತಾಲ್ಲೂಕಿನ ಕೋಳಾಲ ಹೋಬಳಿಯ 17 ಗ್ರಾಮಗಳ 2681 ಎಕರೆ 24 ಗುಂಟೆ ಮತ್ತು ದೊಡ್ಡಬಳ್ಳಾಪುರ ತಾಲ್ಲೂಕಿನ ಸಾಸಲು ಹೋಬಳಿಯ 11 ಗ್ರಾಮಗಳ 2797 ಎಕರೆ 9 ಗುಂಟೆ ಸೇರಿ ಒಟ್ಟು 5478 ಎಕರೆ 33 ಗುಂಟೆ ಭೂಮಿಯ ಭೂಸ್ವಾಧೀನ ಅವಶ್ಯಕತೆಯಿರುತ್ತದೆ. ಕೊರಟಗೆರೆ ತಾಲ್ಲೂಕಿನಲ್ಲಿ ಮುಳುಗಡೆಯಾಗುವ ಜಮೀನುಗಳಿಗೂ ಸಹಾ ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಮುಳುಗಡೆಯಾಗುವ ಜಮೀನುಗಳಿಗೆ ನೀಡುವ ಪರಿಹಾರ ದರವನ್ನೇ ನೀಡಲು ಒತ್ತಾಯಿಸಿದ್ದರಿಂದ ಕಾಮಗಾರಿಯನ್ನು ಆರಂಭಿಸಲು ಸಾಧ್ಯವಾಗಿರುವುದಿಲ್ಲ.
- ✓ ಭೈರಗೊಂಡ್ಲು ಜಲಾಶಯ ನಂತರದ ಲಿಫ್ಟ್ ಮತ್ತು ಫೀಡರ್ ಕಾಲುವೆ ಕಾಮಗಾರಿಗಳ ಮುಖಾಂತರ ಬೆಂಗಳೂರು ಗ್ರಾಮಾಂತರ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಕುಡಿಯುವ ನೀರು ಪೂರೈಸಲು ಮತ್ತು ಕೆರೆ ತುಂಬಿಸಲು ಅನುಮೋದಿತ ಯೋಜನಾ ವರದಿಯಲ್ಲಿ ಅವಕಾಶ ಕಲ್ಪಿಸಲಾಗಿದ್ದು, ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯಿಂದ ಮಾತ್ರ ಈ ಪ್ರದೇಶಗಳಿಗೆ ಸುರಕ್ಷಿತ ಕುಡಿಯುವ ನೀರನ್ನು ಪೂರೈಸಲು ಸಾಧ್ಯವಿದ್ದು, ಈ ಕಾಮಗಾರಿಗಳನ್ನು ಕೂಡಲೇ ಕೈಗೆತ್ತಿಕೊಳ್ಳಲು ಸದರಿ ಜಿಲ್ಲೆಗಳ ಜನಪ್ರತಿನಿಧಿಗಳು ತೀವ್ರವಾಗಿ ಒತ್ತಾಯಿಸುತ್ತಿರುವುದರಿಂದ ಸಮತೋಲನ ಜಲಾಶಯ ನಿರ್ಮಾಣದ ಪರ್ಯಾಯ ಪ್ರಸ್ತಾವನೆಯೊಂದನ್ನು ತಯಾರಿಸಲಾಗಿದ್ದು, ಸದರಿ ಪರ್ಯಾಯ ಪ್ರಸ್ತಾವನೆಯನ್ನು ಒಳಗೊಂಡ ರೂ.23,251.66 ಕೋಟಿ ಮೊತ್ತದ ಪುನರ್ ಪರಿಷ್ಕೃತ ಯೋಜನಾ ವರದಿಯನ್ನು ನಿಗಮದ ನಿರ್ದೇಶಕರ ಮಂಡಳಿಯ ಅನುಮೋದನೆಯ ಮತ್ತು ಶಿಫಾರಸ್ಸಿನ ಮೇರೆಗೆ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿತ್ತು. ಸದರಿ ಪ್ರಸ್ತಾವನೆಯ ಕುರಿತು ಆರ್ಥಿಕ ಇಲಾಖೆಯು ಕೆಲವು ಸ್ಪಷ್ಟೀಕರಣವನ್ನು ಕೋರಿದ್ದು, ಪರಿಶೀಲಿಸಿ ವರದಿಯನ್ನು ಸಲ್ಲಿಸುವಂತೆ ವ್ಯನಿ., ವಿ.ಜ.ನಿ.ನಿ ರವರನ್ನು ಕೋರಲಾಗಿದೆ.
- ✓ ಜಲಾಶಯ ನಿರ್ಮಾಣದ ಪರ್ಯಾಯ ಪ್ರಸ್ತಾವನೆಯ ಅನುಸಾರ ಭೈರಗೊಂಡ್ಲು ಜಲಾಶಯದ ನಂತರದ ಲಿಫ್ಟ್ ಕಾಂಪೋನೆಂಟ್ ಕಾಮಗಾರಿಗಳಿಗೆ ಟೆಂಡರ್ ಆಹ್ವಾನಿಸಲಾಗಿದ್ದು, ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿದೆ.
- ✓ ಭೈರಗೊಂಡ್ಲು ಜಲಾಶಯದಿಂದ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ನೀರೊದಗಿಸುವ ಕೋಲಾರ ಮತ್ತು ಶ್ರೀನಿವಾಸಪುರ ಫೀಡರ್ ಕಾಲುವೆ ಕಾಮಗಾರಿಗಳ ಅಂದಾಜು ಪಟ್ಟಿಗಳು ತಯಾರಿಕಾ ಹಂತದಲ್ಲಿವೆ.

ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಭೈರಗೊಂಡ್ಲು ಜಲಾಶಯದ ವರೆಗಿನ ಕಾಮಗಾರಿಗಳಿಗೆ ಒಟ್ಟು 5695 ಎ 26.04 ಗುಂ ಜಮೀನನ್ನು ಭೂಸ್ವಾಧೀನ ಪಡಿಸಿಕೊಳ್ಳಬೇಕಾಗಿದ್ದು, ಈ ಪೈಕಿ, 1765 ಎ 15 ಗುಂ ಜಮೀನನ್ನು ಭೂಸ್ವಾಧೀನಪಡಿಸಿಕೊಳ್ಳಲಾಗಿದೆ. ಬಾಕಿ ಜಮೀನಿಗೆ ಭೂಸ್ವಾಧೀನ ಪ್ರಕ್ರಿಯೆಯು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುತ್ತದೆ.

ಭೂಸ್ವಾಧೀನ ಪ್ರಕ್ರಿಯೆ, ಅರಣ್ಯ ಪ್ರದೇಶಕ್ಕೆ ಸಂಬಂಧಿಸಿದಂತೆ ತೀರುವಳಿ, ಹಸಿರು ನ್ಯಾಯಾಧೀಕರಣದಲ್ಲಿ ದಾಖಲಾದ ದಾವೆಗಳು, ರಾಷ್ಟ್ರೀಯ ಹೆದ್ದಾರಿ ಮತ್ತು ರೈಲ್ವೆ ಇಲಾಖೆಯ ಕ್ರಾಸಿಂಗ್‌ಗಳಿಗೆ ಸಂಬಂಧಿಸಿದ ಅನುಮತಿ ದೊರೆಯುವಲ್ಲಿ ಉಂಟಾಗಿರುವ ವಿಳಂಬದಿಂದ ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯನ್ನು ನಿಯಮಿತ ಅವಧಿಯಲ್ಲಿ ಪೂರ್ಣಗೊಳಿಸಲು ಸಾಧ್ಯವಾಗಿರುವುದಿಲ್ಲ.

ಸದರಿ ಯೋಜನೆಯ ಕಾಮಗಾರಿಗಳಿಗಾಗಿ ಭೂಸ್ವಾಧೀನ ಪ್ರಕ್ರಿಯೆ ಮತ್ತು ಅರಣ್ಯ ತೀರುವಳಿಗೆ ಸಂಬಂಧಿಸಿದ ಹಾಗೂ ಇನ್ನಿತರೆ ಇಲಾಖೆಗಳಿಂದ ಅವಶ್ಯಕ ಅನುಮೋದನೆ ಪಡೆದು ಹಾಗೂ ಕಾನೂನು ತೊಡಕುಗಳನ್ನು ನಿವಾರಿಸಿಕೊಂಡು ಮತ್ತು ಬಾಕಿ ಕಾಮಗಾರಿಗಳಿಗೆ ಅಗತ್ಯವಿರುವ ಆರ್ಥಿಕ ಸಂಪನ್ಮೂಲಗಳನ್ನು ಆದ್ಯತೆ ಅನುಸಾರ ಒದಗಿಸಿಕೊಂಡು 2023-24ರ ಅಂತ್ಯದೊಳಗೆ ಪ್ರಸ್ತುತ ಪ್ರಗತಿಯಲ್ಲಿರುವ ಯೋಜನೆಯಡಿಯಲ್ಲಿನ ಈ ಕೆಳಕಂಡ ಕಾಮಗಾರಿಗಳನ್ನು ಪೂರ್ಣಗೊಳಿಸಲು ಯೋಜಿಸಲಾಗಿದೆ.

- ಮೊದಲನೆ ಹಂತದ ಏತ ಮತ್ತು ವಿದ್ಯುತ್ ಕಾಮಗಾರಿಗಳು.
- ಎರಡನೆ ಹಂತದ ಗುರುತ್ವ ಕಾಲುವೆ ಕಾಮಗಾರಿಗಳು.
- ಭೈರಗೊಂಡ್ಲು ಜಲಾಶಯಕ್ಕಿಂತ ಮುಂಚೆ ಕವಲೊಡೆಯುವ ವಿವಿಧ ಫೀಡರ್ ಕಾಲುವೆ ಕಾಮಗಾರಿಗಳು.

ಸದರಿ ಯೋಜನೆಯಡಿ ಪ್ರಗತಿಯಲ್ಲಿರುವ ಕಾಮಗಾರಿಗಳಿಗಾಗಿ ಪ್ರಸಕ್ತ ಸಾಲಿನಲ್ಲಿ ರೂ.910.00 ಕೋಟಿಯ ಅನುದಾನ ಒದಗಿಸಲಾಗಿದ್ದು, ಅಕ್ಟೋಬರ್ ಅಂತ್ಯದ ವರೆಗೆ ರೂ.663.91 ಕೋಟಿ ವೆಚ್ಚ ಮಾಡಲಾಗಿದ್ದು, ಒಟ್ಟಾರೆ ರೂ.9274.82 ಕೋಟಿಗಳ ಸಂಚಿತ ವೆಚ್ಚ ಮಾಡಲಾಗಿದೆ.

**ಸಂಖ್ಯೆ: ಜಸಂಇ 120 ಡಬ್ಲ್ಯೂಎಲ್ಎ 2021**

(ಗೋವಿಂದ ಎಂ. ಕಾರಜೋಳ)
ಜಲಸಂಪನ್ಮೂಲ ಸಚಿವರು